ವಿಜಯವಾಣಿ ನಂ 1

# ಪ್ಲಾಸ್ಟಿಕ್ ಮೇಲಿನ ತೆರಿಗೆ ಹೆಚ್ಚಳ

## ಗುಡಿ ಕೈಗಾರಿಕೆಗೆ ಪ್ರೋತ್ಸಾಹ | ಮುಖ್ಯಮಂತ್ರಿ ಕುಮಾರಸ್ವಾಮಿ ಭರವಸೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಪ್ಲಾಸ್ಟಿಕ್‌ನ ಮೇಲಿನ ತೆರಿಗೆಯನ್ನು ಶೇ.4ರಿಂದ 5 ಹೆಚ್ಚಳ ಮಾಡುವ ಮೂಲಕ ಪ್ಲಾಸ್ಟಿಕ್ ಉತ್ಪನ್ನಗಳ ಬಳಕೆಗೆ ಕಡಿವಾಣ ಹಾಕಲು ಚಿಂತನೆ ನಡೆಸಿದ್ದೇವೆ ಎಂದು ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆ ಮಂಗಳವಾರ ಮಲ್ಲೇಶ್ವರದ ಚೌಡಯ್ಯ ಮೆಮೋರಿಯಲ್ ಹಾಲ್‌ನಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಪರಿಸರ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಪ್ಲಾಸ್ಟಿಕ್ ತ್ಯಾಜ್ಯದಿಂದ ಗಾಳಿ, ನೀರು ಸೇರಿ ಇಡೀ ಪರಿಸರ ವಿಷವಾಗುತ್ತಿದೆ. ಕ್ಯಾನ್ಸರ್‌ನಂತಹ ಮಹಾಮಾರಿ ಹರಡುವ ಜತೆಗೆ ಪರಿಸರದಲ್ಲಿ ಉಷ್ಣಾಂಶ ಹೆಚ್ಚಳವಾಗುತ್ತಿದೆ. ಅರಣ್ಯ ಇಲಾಖೆ ಅಧಿಕಾರಿಗಳು ಪ್ರತಿವರ್ಷ 10ರಿಂದ 15 ಕೋಟಿ ಗಿಡ ನೆಡಲಾಗಿದೆ ಎಂದು ಅಂಕಿ-ಅಂಶದಲ್ಲಿ ತೋರಿಸುತ್ತಾರೆ. ಆದರೆ, ಪ್ರಾಮಾಣಿಕವಾಗಿ ಗಿಡ ನೆಟ್ಟು ಪೋಷಿಸುವ ಕಾರ್ಯಕ್ರಮವಾಗುತ್ತಿಲ್ಲ. ಅಷ್ಟಕ್ಕೂ ಈ ವಿಚಾರವಾಗಿ ಕೇವಲ ಚರ್ಚಿಸಿದರೆ ಯಾವುದೇ ಪ್ರಯೋಜನವಾಗದು. ಹೀಗಾಗಿ ಪ್ಲಾಸ್ಟಿಕ್ ಮೇಲಿನ ತೆರಿಗೆ ಹೆಚ್ಚಳಕ್ಕೆ ಕ್ರಮ ಕೈಗೊಳ್ಳುತ್ತೇವೆ. ಈಗಾಗಲೇ ಈ ವಿಚಾರವಾಗಿ ಚಿಂತನೆ ನಡೆದಿದೆ ಎಂದು ಮಾಹಿತಿ ನೀಡಿದರು.

» ಗಿಡ ನೆಡುವ ಕಾರ್ಯಕ್ರಮ ಕೇವಲ ಚರ್ಚಿಸಿದರೆ ಪ್ರಯೋಜನವಿಲ್ಲ

**ಗುಡಿ ಕೈಗಾರಿಕೆಗೆ ಆದ್ಯತೆ:** ಗ್ರಾಮೀಣ ಪ್ರದೇಶದ ಯುವಜನತೆ ಉದ್ಯೋಗಕ್ಕಾಗಿ ನಗರಗಳಿಗೆ ವಲಸೆ ಬರುತ್ತಿದ್ದಾರೆ. ಈ ಪರಿಸ್ಥಿತಿ ಬದಲಾಯಿಸಲು ಗುಡಿ ಕೈಗಾರಿಕೆಗೆ ಪ್ರೋತ್ಸಾಹ ನೀಡಲಾಗುವುದು. ಈ ಹಿಂದೆ ತೆಂಗಿನ ನಾರಿನಿಂದ ಬ್ಯಾಗ್ ಸೇರಿ ಜನಬಳಕೆ ವಸ್ತುಗಳನ್ನು ತಯಾರಿಸಲಾಗುತಿತ್ತು. ಆದರೆ, ಆಧುನಿಕತೆಯ ಭರಾಟೆಯಲ್ಲಿ ಗ್ರಾಮೀಣ ಕರಕುಶಲ ವಸ್ತುಗಳು ಮರೆಯಾಗುತ್ತಿವೆ. ಗ್ರಾಮೀಣ ಪ್ರದೇಶದ ಪರಿಸರಸ್ನೇಹಿ ವಸ್ತುಗಳನ್ನು ಮುಂಚೂಣಿಗೆ ತರಲು ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಕುಮಾರಸ್ವಾಮಿ ಭರವಸೆ ನೀಡಿದರು.

ಮೇಯರ್ ಎನ್. ಸಂಪತ್‌ರಾಜ್, ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಲಕ್ಷ್ಮಣ್ ಮತ್ತಿತರರು ಉಪಸ್ಥಿತರಿದ್ದರು.



ವಿಜಯವಾಣಿ ಚಿತ್ರ

ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಚೌಡಯ್ಯ ಮೆಮೋರಿಯಲ್ ಹಾಲ್‌ನಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ 2017-18ನೇ ಸಾಲಿನ ರಾಜ್ಯ ಪರಿಸರ ಪ್ರಶಸ್ತಿಯನ್ನು ಸಂಸ್ಥೆ, ನಿಗಮ ಮತ್ತು ಶಾಲೆಗಳಿಗೆ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಪ್ರದಾನ ಮಾಡಿದರು. ಶಾಸಕ ಡಾ. ಸಿ.ಎನ್. ಅಶ್ವತ್ಥನಾರಾಯಣ, ನಟ ದರ್ಶನ್ ಮತ್ತಿತರರಿದ್ದರು.

## ರಾಜ್ಯ ಪರಿಸರ ಪ್ರಶಸ್ತಿ ಪ್ರದಾನ

ವಿಶ್ವ ಪರಿಸರ ದಿನದ ಪ್ರಯುಕ್ತ 2017-18ನೇ ಸಾಲಿನ ರಾಜ್ಯ ಪರಿಸರ ಪ್ರಶಸ್ತಿಯನ್ನು ಕುಮಾರಸ್ವಾಮಿ ಪ್ರದಾನ ಮಾಡಿದರು. ವ್ಯಕ್ತಿ ವಿಭಾಗದಲ್ಲಿ ಭಾರತೀಯ ವಿಜ್ಞಾನ ಸಂಸ್ಥೆಯ ಡಾ. ಟಿ.ವಿ. ರಾಮಚಂದ್ರ, ಮಲೆನಾಡು ಮತ್ತು ಕರಾವಳಿ ವಲಯದಲ್ಲಿ ಪಮೇಲಾ ಮಲ್ಹೋತ್ರಾ, ಉತ್ತರ ವಲಯದಲ್ಲಿ ಅಜಯ್ ಎ. ದೇಸಾಯಿ ಪ್ರಶಸ್ತಿ ಸ್ವೀಕರಿಸಿದರು. ಸಂಸ್ಥೆಗಳ ವಿಭಾಗದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನಗಳ ಅಭಿವೃದ್ಧಿ ನಿಗಮ, ಉಡುಪಿ ಹಾಗೂ ಜಿಲ್ಲಾ ಪಂಚಾಯತಿ ಪ್ರಶಸ್ತಿ ಪಡೆದುಕೊಂಡವು. ವಲಯವಾರು ಪರಿಸರ ಶಾಲೆ ಪ್ರಶಸ್ತಿಗಳನ್ನು ವಿತರಿಸಲಾಯಿತು. ಬೆಂಗಳೂರು ವಲಯದಲ್ಲಿ ಸರ್ಕಾರಿ ಪ್ರೌಢಶಾಲೆ ಬನವಾಸಿ (ಕನಕಪುರ), ಮೈಸೂರು ವಲಯದಲ್ಲಿ ಬಿ. ಸಿದ್ದಣ್ಣಯ್ಯ ಪ್ರೌಢಶಾಲೆ ಬಾಳುಪೇಟೆ (ಸಕಲೇಶಪುರ), ಮಂಗಳೂರು ವಲಯದಲ್ಲಿ ಶ್ರೀ ಸತ್ಯಸಾಯಿ ಲೋಕಸೇವಾ ಪ್ರೌಢಶಾಲೆ ಆಳಿಕೆ (ಬಂಟ್ವಾಳ), ಧಾರವಾಡ ವಲಯದಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಪರಸಾಪುರ (ಕಲಘಟಗಿ), ಕಲಬುರಗಿ ವಲಯದಲ್ಲಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ಚಬ್ನೂರು (ಬಸವನ ಬಾಗೇವಾಡಿ), ಬಳ್ಳಾರಿ ವಲಯದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ತಾಳೂರು (ಸಿರಗುಪ್ಪ) ಹಾಗೂ ಚಿತ್ರದುರ್ಗ ವಲಯದ ಒಣಕಲ್ಲು ಗುಡ್ಡ (ಹಿರಿಯೂರು) ಶಾಲೆ ಪ್ರಶಸ್ತಿಗೆ ಭಾಜನವಾದವು.

## ಪರಿಸರ ರಕ್ಷಿಸುವಲ್ಲಿ ಸರ್ಕಾರ ವಿಫಲ

ಬೆಂಗಳೂರಿನಂತಹ ನಗರದಲ್ಲಿ ಪ್ರತಿದಿನ 4 ಸಾವಿರ ಟನ್ ತ್ಯಾಜ್ಯ ವಿಲೇವಾರಿಯಾಗುತ್ತಿದೆ. ಇದರಲ್ಲಿ 200 ಟನ್ ಕಸವನ್ನು ಮಾತ್ರ ಮರುಬಳಕೆ ಮಾಡಲಾಗುತ್ತಿದೆ. ಉಳಿದ 3,800 ಟನ್ ಕಸವನ್ನು ಅವೈಜ್ಞಾನಿಕವಾಗಿ ಎಲ್ಲೆಂದರಲ್ಲಿ ಹಾಕಲಾಗುತ್ತಿದೆ. ಪರಿಸ್ಥಿತಿ ಹೀಗೆ ಮುಂದುವರಿದರೆ ಭವಿಷ್ಯದಲ್ಲಿ ಗಂಭೀರ ಸಮಸ್ಯೆ ಎದುರಿಸಬೇಕಾಗುತ್ತದೆ. ಇನ್ನು ಗೃಹ ನಿರ್ಮಾಣದಿಂದ ಶೇ.70 ಮಾಲಿನ್ಯವಾಗುತ್ತಿದೆ. ಸರ್ಕಾರದ ವೈಫಲ್ಯದಿಂದಲೇ ಪ್ರಕೃತಿಗೆ ಮಾರಕವಾಗುವ ಚಟುವಟಿಕೆ ಅಧಿಕವಾಗಿದೆ ಎಂದು ಶಾಸಕ ಡಾ. ಸಿ.ಎನ್. ಅಶ್ವತ್ಥನಾರಾಯಣ ಬೇಸರ ವ್ಯಕ್ತಪಡಿಸಿದರು.

“ ಮೆಟ್ರೋ ಯೋಜನೆಗಾಗಿ ಸಾವಿರ ಮರಗಳನ್ನು ಕಡಿಯಲಾಯಿತು. ನಾವೇ ಹಂತಹಂತವಾಗಿ ಪರಿಸರ ಹಾಳು ಮಾಡುತ್ತಿದ್ದೇವೆ. ಪ್ರತಿಯೊಬ್ಬರೂ ಮನೆ ಮುಂದೆ ಸಸಿ ನೆಟ್ಟು ಈ ದಿನವನ್ನು ಅರ್ಥಪೂರ್ಣವಾಗಿ ಆಚರಿಸಿ.

| ಎಚ್.ಡಿ. ಕುಮಾರಸ್ವಾಮಿ ಮುಖ್ಯಮಂತ್ರಿ

“ ಮುಂದಿನ ಪೀಳಿಗೆ ಕಾಡನ್ನು ಕಣ್ತುಂಬಿಕೊಳ್ಳಬೇಕಾದರೆ ನಾವು ಕಾಡನ್ನು ರಕ್ಷಿಸಬೇಕು. ಗಿಡವನ್ನು ನೆಡುವ ಜತೆಗೆ ಅದನ್ನು ಪೋಷಿಸಬೇಕು. ಹೆತ್ತ ತಾಯಿಯಷ್ಟೇ ಗಿಡಗಳಿಗೆ ಪ್ರೀತಿ ತೋರಿಸಿ.

| ದರ್ಶನ್ ಚಲನಚಿತ್ರ ನಟ

Bengaluru Edition
6 Jun, 2018 Page No. 6
Powered by : erelego.com